# ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು.

**ಎಸ್.ಸಿ. ಸಂಖ್ಯೆ 338/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಇರ್ಫಾನ್ ಪಾಷಾ | ಪಿಡಬ್ಲ್ಯೂ ಃ 3 |
| ತಂದೆಯ / ಗಂಡನ ಹೆಸರು | : ಅಬ್ದುಲ್ ಸತ್ತಾರ್ | ಸಿಡಬ್ಲ್ಯೂ ಃ 3 |
| ವಯಸ್ಸು | : 34 ವರ್ಷ | |
| ಉದ್ಯೋಗ | : ಆಟೋ ಚಾಲಕ | |
| ವಾಸಸ್ಥಳ | : ಜೆ ಸಿ ನಗರ , ಮೈಸೂರು | |

**ಸಾಕ್ಷಿಯನ್ನು ಈ ದಿನ ದಿಃ 04.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

1. ನಾನು ಮೇಲೆ ಹೇಳಿದ ವಿಳಾಸದಲ್ಲಿ ಹಲವು ವರ್ಷಗಳಿಂದ ವಾಸವಿರುತ್ತೇನೆ.

2. ನಾನು ಸಹಿ ಮಾಡುತ್ತೇನೆ. ಸಾಕ್ಷಿಯೂ ತನ್ನ ಸಹಿ ಇರುವ ದಾಖಲೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ನಾನು ಸದರಿ ದಾಖಲೆಗೆ ಸಹಿಯನ್ನು ನಮ್ಮ ಎದುರುಗಡೆ ಮನೆಯ ಬಳಿ ಹಾಕಿರುತ್ತೇನೆ. ಸದರಿ ಮನೆ ರಮೇಶ್ ದವರದಾಗಿರುತ್ತದೆ. ಸದರಿ ದಾಖಲೆಗೆ ಪೊಲೀಸರು ಸಹಿ ಪಡೆದಿರುತ್ತಾರೆ. ಪೊಲೀಸರು ಅಲ್ಲಿ ಗಲಾಟೆಯಾಗಿದೆ ಎಂದು

ಬಂದಿರುತ್ತಾರೆ. ಪೊಲೀಸರು ಅಲ್ಲಿ ಏನು ಮಾಡಿದರು ಎಂದು ನನಗೆ ತಿಳಿದಿರುವುದಿಲ್ಲ. ಪೊಲಿಸೀರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ತೆಗೆದುಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಕೋರಿದ್ದು, ಸದರಿಯವರ ಕೋರಿಕೆಯನ್ನು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಿದೆ.)

ಪಾಟೀ ಸವಾಲು ಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ

3. ದಿ.11.04.2021 ರಂದು ಪೊಲೀಸರು ಸ್ತಳಕ್ಕೆ ಬಂದಿದ್ದು , ಸದರಿ ಸ್ತಳವನ್ನು ನನ್ನ ಅಕ್ಕ ತೋರಿಸಿದ್ದು, ಅದೇ ಸ್ತಳದಲ್ಲಿ ಗಲಾಟೆಯಾಗಿರುತ್ತದೆ ಎಂದು ತಿಳಿಸಿರುತ್ತಾರೆ ಎಂದರೆ ಸರಿ. ಪೊಲೀಸರು ಸ್ತಳದಲ್ಲಿ ಮಹಜರ್ ಜರುಗಿಸಿರುತ್ತಾರೆ ಎಂದರೆ ಸರಿ. ಸ್ತಳದಲ್ಲಿ ಪೊಲೀಸರಿಗೆ ನನ್ನ ಅಕ್ಕ ಸೆಂಟ್ರಿಂಗ್ ಗೆ ಉಪಯೋಗಿಸುವ ಒಂದು ದೊಣ್ಣೆಯನ್ನು , ಅದೇ ದೊಣ್ಣೆಯಿಂದ ಹಲ್ಲೆ ಮಾಡಿರುತ್ತಾರೆ ಎಂದು ಪೊಲೀಸರಿಗೆ ನೀಡಿರುತಾರೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸದರಿ ಎಂಒ–1 ನ್ನು ತೋರಿಸಿ ಅದೇ ದೊಣ್ಣೆಯನ್ನು ನೀಡಿರುತ್ತಾರೆ ಎಂದರೆ ಸಾಕ್ಷಿಯೂ ಸಾಕ್ಷಿಯೂ ನಾನು ನೋಡಿರುವುದಿಲ್ಲ ಎಂದು ನುಡಿಯುತ್ತಾರೆ. ಮಹಜರ್ ನ ಎಲ್ಲಾ ವಿಚಾರಗಳನ್ನು ತಿಳಿದುಕೊಂಡು ಸ್ತಳದಲ್ಲಿ ಸಹಿ ಹಾಕಿರುತ್ತೇನೆ. ಈಗ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

**(ಪಾಟೀ ಸವಾಲಿಗೆ ಕಾಲಾವಕಾಶ ಕೇಳಿದ್ದು, ಸಕಾರಣ ಇಲ್ಲದೇ ಇರುವುದರಿಂದ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)**

**<u>ಮರು ವಿಚಾರಣೆ ಃ ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಇ ಎ ಒ**

**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು**
**ಮೈಸೂರು.**